# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 674

ಸದಸ್ಯರ ಹೆಸರು : ಡಾ: ಯತೀಂದ್ರ ಎಸ್. (ವಿಧಾನ ಸಭಾ ಕ್ಷೇತ್ರ)

ಉತ್ತರಿಸುವ ದಿನಾಂಕ : 12.12.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಹಳ್ಳಿಗಳು ವೇಗವಾಗಿ ಬೆಳೆಯುತ್ತಿದ್ದು, ಗ್ರಾಮದ ಅಕ್ಕಪಕ್ಕದಲ್ಲಿರುವ ಜಮೀನುಗಳಲ್ಲಿ ಗ್ರಾಮಸ್ಥರು ಮನೆಗಳನ್ನು ನಿರ್ಮಿಸುತ್ತಿದ್ದು, ಪಂಚಾಯತ್ ಖಾತೆಗಳಿಲ್ಲದೆ ರಸ್ತೆ ಚರಂಡಿ, ವಿದ್ಯುತ್ ಸಂಪರ್ಕ, ಕುಡಿಯುವ ನೀರಿನ ವ್ಯವಸ್ಥೆ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಪಡೆಯಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು) | ಬಂದಿದೆ.<br>ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ನಿವೇಶನಗಳು ಮತ್ತು ಕಟ್ಟಡಗಳನ್ನು (ಸರ್ಕಾರಿ/ಸ್ಥಳೀಯ ಸಂಸ್ಥೆ/ಶಾಸನಬದ್ಧ ಸಂಸ್ಥೆ/ಅರಣ್ಯ ಭೂಮಿಯನ್ನು ಹೊರತುಪಡಿಸಿ) ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಪ್ರತ್ಯೇಕ ವಹಿಯಲ್ಲಿ ದಾಖಲಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ರನ್ವಯ ಪ್ರಕರಣ 199 ಬಿ ಮತ್ತು 199 ಸಿ ಹೊಸ ಪ್ರಕರಣಗಳನ್ನು ಸೇರ್ಪಡೆ ಮಾಡಿ ದಿನಾಂಕ:07-04-2025 ರಂದು ಅಧಿಸೂಚನೆ ಹೊರಡಿಸಲಾಗಿದೆ.<br><br>ಅಧಿನಿಯಮಕ್ಕೆ ತಿದ್ದುಪಡಿ ತರಲಾಗಿರುವುದರಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ:RDPR 422 GPA 2025, ದಿನಾಂಕ:17-10-2025 ರಂದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2025 ರಚಿಸಲಾಗಿದ್ದು, ಪ್ರಕರಣ 199ಸಿ ರಂತೆ ನಿವೇಶನಗಳು ಮತ್ತು ಕಟ್ಟಡಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-11ಬಿ ಖಾತೆ ನೀಡಲು ಅವಕಾಶ ಕಲ್ಪಿಸಲಾಗಿದೆ. |
| (ಆ) | ಗ್ರಾಮಠಾಣಾ ವ್ಯಾಪ್ತಿಯನ್ನು ನಿಯಮಿತವಾಗಿ ವಿಸ್ತರಿಸುವ ಮೂಲಕ ಸದರಿ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಿದ್ದು; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು) | ಗ್ರಾಮ ಠಾಣಾದಲ್ಲಿ ತೆರಿಗೆ ನಿರ್ಧರಣೆ ಪಟ್ಟಿಗೆ ಒಳಪಟ್ಟಿರುವ ಮತ್ತು ತೆರಿಗೆ ನಿರ್ಧರಣೆ ಪಟ್ಟಿಯನ್ನು ಕೋರಿ ಬರುವ ಅರ್ಜಿಗಳಿಗೆ ಸಂಬಂಧಿಸಿದ ಆಸ್ತಿಗಳನ್ನು ಅಳತೆ ಮಾಡಿ ನಕ್ಷೆ ತಯಾರಿಸಲು ಕಂದಾಯ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಜಂಟಿ ಸುತ್ತೋಲೆ ಸಂಖ್ಯೆ:ಆರ್‌ಡಿ 430 ಎಲ್‌ಜಿಪಿ 2013, ದಿನಾಂಕ:25-08-2014 ರಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿದೆ.<br><br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಕಂದಾಯ ಇಲಾಖೆಯ ಜಂಟಿ ಸುತ್ತೋಲೆ ಸಂಖ್ಯೆ: ಗ್ರಾಅಪ 441 ಗ್ರಾಪಂಅ 2016, (ಭಾಗ-3), |

| | | |
|---|---|---|
| | | ದಿನಾಂಕ:28-10-2016ರಲ್ಲಿ ಗ್ರಾಮಗಳ ಗ್ರಾಮ ಠಾಣಾ ಗಡಿಯನ್ನು ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶವನ್ನು ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ, ಗ್ರಾಮ ಠಾಣಾವನ್ನು ಪುನರ್ ನಿಗಧಿಪಡಿಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿದೆ.<br><br>ಈ ಸುತ್ತೋಲೆಗಳ ಆಧಾರದ ಮೇಲೆ ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಸುತ್ತೋಲೆ ಸಂಖ್ಯೆ: ಪಿ. ಎಂ. ಯು.ಎಂ.ಒಜೆ. ಸಿಐಆರ್-1/2016-17, ದಿನಾಂಕ:20-12-2016 ರಲ್ಲಿ ಮಾರ್ಗಸೂಚಿಗಳನ್ನು ನೀಡ್ಡಲಾಗಿದೆ.<br><br>ಗ್ರಾಮ ಠಾಣಾ ಗಡಿಯನ್ನು ವಿಸ್ತರಿಸುವ ಬಗ್ಗೆ ದಿನಾಂಕ:06-11-2024 ರಂದು ಮಾನ್ಯ ಕಂದಾಯ, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಮತ್ತು ಪೌರಾಡಳಿತ ಸಚಿವರ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಸರ್ವೆ ಇಲಾಖೆಯಲ್ಲಿ service based mode ನಲ್ಲಿ ಕಾರ್ಯನಿರ್ವಹಿಸುತ್ತಿರುವ ಲೈಸೆನ್ಸಡ್ ಸರ್ವೆಯರ್‌ಗಳ ಸೇವೆಯನ್ನು ಪಡೆದು ಗ್ರಾಮದ ಕಟ್ಟಡ ಮತ್ತು ನಿವೇಶನಗಳ ಮೋಜಣಿ ನಡೆಸಿ ದಾಖಲೆಗಳನ್ನು ಹಾಗೂ ನಕ್ಷೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಅನುಸರಿಸುತ್ತಿರುವ ವಿಧಿ ವಿಧಾನದ ಮಾದರಿಯಲ್ಲಿ ಸಿದ್ಧಪಡಿಸುವಂತೆ ಸಲಹೆ ನೀಡಲಾಗಿದೆ. |

**ಸಂಖ್ಯೆ:** ಗ್ರಾಅಪ 949 ಜಿಪಿಎ 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು